58

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 151 ಪಬವ 2014

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 15.11.2014

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ ಸಂಖ್ಯೆ.14) ರ ಕಲಂ 3ರ ಉಪ ಕಲಂ (1) ಸಹವಾಚನ ಕಲಂ 8ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಅಧಿನಿಯಮದ ಕಲಂ 3ರಡಿಯ ಉಪ ಕಲಂ (2) ಖಂಡ (ಎ) ರಲ್ಲಿ ಅಗತ್ಯಪಡಿಸಲಾಗಿರುವಂತೆ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008ಕ್ಕೆ ಮತ್ತಷ್ಟು ತಿದ್ದುಪಡಿ ತರಲು ಕರ್ನಾಟಕ ಸರ್ಕಾರವು ಉದ್ದೇಶಿಸಿದ್ದು, ಅದರಂತೆ ಕೆಳಕಂಡ ಕರಡು ನಿಯಮಗಳನ್ನು ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಹಾಗೂ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಯಾದ 15 ದಿನಗಳೊಳಗಾಗಿ ಸದರಿ ಕರಡನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳುವಳಿಕೆ ನೀಡಲಾಗಿದೆ.

ಸದರಿ ಕರಡು ನಿಯಮಗಳ ಬಗ್ಗೆ ಮೇಲೆ ನಿರ್ದಿಷ್ಟಪಡಿಸಿದ ಅವಧಿಯ ಒಳಗೆ ಯಾವುದೇ ವ್ಯಕ್ತಿಯಿಂದ ಸ್ವೀಕೃತವಾಗಬಹುದಾದ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು-560 001 ಇವರಿಗೆ ಕಳುಹಿಸಬಹುದಾಗಿದೆ.

## ಕರಡು ನಿಯಮಗಳು

1. **ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) (ತಿದ್ದುಪಡಿ) ನಿಯಮಗಳು, 2014 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಅನುಸೂಚಿಯ ತಿದ್ದುಪಡಿ:-** ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008ರ ಅನುಸೂಚಿಯಲ್ಲಿನ ಕ್ರಮ ಸಂಖ್ಯೆ: 5ರಲ್ಲಿನ "ಕಾರ್ಯನಿರ್ವಾಹಕ ಅಧಿಕಾರಿ, ಪಂಚಾಯತ್ ರಾಜ್ / ಸಹಾಯಕ ಕಾರ್ಯದರ್ಶಿ, ಪಂಚಾಯತ್ ರಾಜ್" ವರ್ಗದ ಹುದ್ದೆಗೆ ಸಂಬಂಧಿಸಿದಂತೆ ಅಂಕಣ 5 ರಲ್ಲಿನ ಶೀರ್ಷಿಕೆ "ಮುಂಬಡ್ತಿಗಾಗಿ" ರ ಅಡಿಯಲ್ಲಿನ ಮೊದಲನೇ ಪರಂತುಕದ ನಮೂದುಗಳಿಗೆ ಬದಲಾಗಿ ಈ ಕೆಳಕಂಡ ನಮೂದುಗಳನ್ನು ಅಳವಡಿಸಲಾಗಿದೆ, ಅದೇನೆಂದರೆ:-

"ಪರಂತು, ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) (ತಿದ್ದುಪಡಿ) ನಿಯಮಗಳು, 2014 ಪ್ರಾರಂಭವಾದ ದಿನಾಂಕದಿಂದ ಇನ್ನೂ ಒಂದು ವರ್ಷದ ಅವಧಿಯ ತನಕ ಮೂರು ವರ್ಷಗಳಿಗೆ ಕಡಿಮೆ

ಇಲ್ಲದಂತೆ ಸೇವೆ ಸಲ್ಲಿಸಿದ ವ್ಯಕ್ತಿಯು ಲಭ್ಯವಿಲ್ಲದಿದ್ದಲ್ಲಿ, ಒಂದು ವರ್ಷಕ್ಕಿಂತ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ವ್ಯಕ್ತಿಯನ್ನು ಮುಂಬಡ್ತಿಗೆ ಪರಿಗಣಿಸಬಹುದು".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಈ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರ ದಿನಾಂಕ: 15.11.2014 ರಲ್ಲಿ ಪ್ರಕಟಿಸಿ, ಇದರ 500 ಪ್ರತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸುವಂತೆ ಕೋರಿದೆ.

<u>ಪ್ರತಿಯನ್ನು:</u>

1) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪ ಕಾರ್ಯದರ್ಶಿಗಳು.
3) ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿ/ ಜಿಲ್ಲಾ ಪಂಚಾಯತ್‌ನ ಸಹಾಯಕ ಕಾರ್ಯದರ್ಶಿಗಳು-ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ.
4) ಸಿಸ್ಟಮ್ ಮ್ಯಾನೇಜರ್, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ- ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸಚಿವ ಸಂಪುಟ ಶಾಖೆ (ಉಲ್ಲೇಖ: ಸಚಿವ ಸಂಪುಟದ ವಿಷಯ ಸಂಖ್ಯೆ: ಸಿ 592/2014 ದಿನಾಂಕ: 12.11.2014).
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಹೆಚ್ಚುವರಿ ಕಾರ್ಯದರ್ಶಿ (ಆ) / ಉಪ ಕಾರ್ಯದರ್ಶಿ (ಆ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆ.